MARCH 29,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಕೃಷಿಭೂಮಿಯಲ್ಲಿ ಬೆಳೆಯುವ ಶ್ರೀಗಂಧ ಮರಗಳ ಮೌಲ್ಯಧಾರಣೆಯನ್ನು ವೈಜ್ಞಾನಿಕವಾಗಿ ನಿರ್ಧರಿಸಲು ತೋಟಗಾರಿಕೆ ಇಲಾಖೆಗೆ ಅನುಮತಿ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು. ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಗೌರವಾಧ್ಯಕ್ಷರಾದ ಕೆ.ಅಮರ ನಾರಾಯಣ ನೇತೃತ್ವದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಸಮಾಲೋಚನೆ ನಡೆಸಲಾಯಿತು. ಅರಣ್ಯದಲ್ಲಿರುವ ಶ್ರೀಗಂಧದ ಮರಗಳನ್ನು ಮಾತ್ರ ಅರಣ್ಯ ಇಲಾಖೆ ವ್ಯಾಪ್ತಿಗೆ ಒಳಪಡಿಸಬೇಕು, ತೋಟದಲ್ಲಿ ಬೆಳೆಯುವ ಮರಗಳನ್ನು ತೋಟಗಾರಿಕಾ ಇಲಾಖೆಯ ವ್ಯಾಪ್ತಿಗೆ ಒಳಪಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಮನವಿ ಪತ್ರವನ್ನು ಮುಖ್ಯಮಂತ್ರಿಯವರಿಗೆ ಸಲ್ಲಿಸಲಾಯಿತು.

<><><>

ಧಾರವಾಡ ಜಿಲ್ಲೆಯ ಒಟ್ಟು 35 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾಮಗಳೆಂದು ಘೋಷಿಸಲಾಗಿದೆ. ಕೇಂದ್ರ ಸರ್ಕಾರದ ನಿ–ಕ್ಷಯ ಪೋಷಣ್ ಅಭಿಯಾನವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಕ್ಷಯ ಮುಕ್ತ ಗ್ರಾಮವಾದ– ನಿಗದಿ ಗ್ರಾಮ ಪಂಚಾಯತ್, ಅಧ್ಯಕ್ಷರಾದ ಸುನಂದಾ ಬಡಿಗೇರ್ ಅವರು ಪ್ರದೇಶ ಸಾಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಬೈಟ್: ಸುನಂದಾ ಬಡಿಗೇರ್ 36 ಸೆಕೆಂದುಗಳು

<><><>

ಕರ್ನಾಟಕ ರಾಜ್ಯ ಲಾನ್ ಟೆನ್ನಿಸ್ ಅಸೋಸಿಯೇಶನ್ – KSLTA , ಬೆಂಗಳೂರು ಟೆನಿಸ್ ಸ್ಟೇಡಿಯಂ ಗೆ, ಮಾಜಿ ಮುಖ್ಯಮಂತ್ರಿ ದಿವಗಂತ ಎಸ್.ಎಂ ಕೃಷ್ಣ ಅವರ ಹೆಸರನ್ನಿಟ್ಟು ಮರು ನಾಮಕರಣ ಮಾಡಲಾಗಿದೆ. ಕೆ.ಎಸ್.ಎಲ್.ಟಿ. ಅಸೋಸಿಯೇಶನ್, ರಾಜ್ಯ ಸರ್ಕಾರ ಸಹಭಾಗಿತ್ವದಲ್ಲಿ, ಎಸ್.ಎಂ ಕೃಷ್ಣ ಮೆಮೊರಿಯಲ್ ಓಪನ್ ಟೆನಿಸ್ ಕ್ರೀಡಾಕೂಟವನ್ನು ಉದ್ಘಾಟಿಸಲಾಯಿತು. ಈ ತಿಂಗಳ 31 ನೇ ತಾರೀಖಿನಿಂದ ಏಪ್ರಿಲ್ 6 ರ ತನಕ ಕ್ರೀಡಾಕೂಟವು ಆಯೋಜಿತವಾಗಿದೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ರಾಜ್ಯ ಗ್ರಾಮಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು, ರಾಜ್ಯದ ಭರವಸೆಯ 10 ಟೆನಿಸ್ ಆಟಗಾರರಿಗೆ ಸರ್ಕಾರವು ಒಟ್ಟು 12 ಲಕ್ಷ ರೂಪಾಯಿ ಸ್ಕಾಲರಶಿಪ್ ನೀಡಲಿದೆ ಎಂದರು.

<><><>

ಸಾರ್ವಜನಿಕ ಸ್ಥಳಗಳಲ್ಲಿ, ಮದ್ಯಪಾನ ನಿಷೇಧಿಸಲಾಗಿದೆ; ನಿಗದಿತ ಸ್ಥಳಗಳನ್ನು ಹೊರತು ಪಡಿಸಿ, ಮದ್ಯಪಾನ ಮಾಡುವವರ ವಿರುದ್ಧ, ಕಟ್ಟುನಿಟ್ಟಿನ ಕಾನೂನು ಕ್ರಮ ಪೊಲೀಸರು ಕೈಗೊಳ್ಳಲಿದ್ದಾರೆ ಎಂದು, ಅಬಕಾರಿ ಖಾತೆ ಸಚಿವ ಆರ್.ಬಿ. ತಿಮ್ಮಾಪೂರ ತಿಳಿಸಿದ್ದಾರೆ. ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಅವರು ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲಿಸಿದರು. ಕಲಬುರಗಿ ವಿಭಾಗದ ಸಾರ್ವಜನಿಕ ಜಾಗೆ, ಉದ್ಯಾನ, ಹೊರ ವಲಯಗಳಲ್ಲಿ ಮದ್ಯ ಸೇವಿಸಿದ, 359 ಜನರ ಮೇಲೆ, ಪ್ರಕರಣಗಳು ದಾಖಲಾಗಿವೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

<><><>

ತುಮಕೂರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು, ಪ್ರಾದೇಶಿಕ ಕೇಂದ್ರವಾಗಿ ಉನ್ನತೀಕರಿಸಿ, ಕೇಂದ್ರದ ಆವರಣದಲ್ಲಿ ತಾರಾಲಯ ನಿರ್ಮಿಸಲಾಗುವುದು ಎಂದು, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ. ತುಮಕೂರು ವಿಶ್ವವಿದ್ಯಾಲಯದ ಆವರಣದಲ್ಲಿ, ನೂತನವಾಗಿ ನಿರ್ಮಿಸಲಾದ, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಸರ್ವರಿಗೂ, ಸುಲಭ, ಸುಸ್ಥಿರ ಅಭಿವೃದ್ಧಿಗಾಗಿ ವಿಜ್ಞಾನ ಎಂಬ, ಧ್ಯೇಯದೊಂದಿಗೆ, ದಕ್ಷಿಣ ಭಾರತದಲ್ಲೇ ಮೊದಲ, ವಿಜ್ಞಾನ ನಗರಿ ನಿರ್ಮಾಣಕ್ಕೆ, ಸಿದ್ಧತೆ ನಡೆದಿದೆ ಎಂದರು.

<><><>

ಯುಗಾದಿ ಹಾಗೂ ರಂಜಾನ್ ಹಬ್ಬದ ಹಿನ್ನೆಲೆ, ರಾಜ್ಯ ರಸ್ತೆ ಸಾರಿಗೆ ನಿಗಮ, 2 ಸಾವಿರ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಮಾಡಿದೆ. ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ, ನಾಳೆ 30ರ ವರೆಗೆ ವಿಶೇ ' ಸಾರಿಗೆ ಲಭ್ಯವಿದ್ದು, ಮುಂಗಡ ಬುಕ್ಕಿಂಗ್‌ಗೆ ಅವಕಾಶ ಕಲ್ಪಿಸಲಾಗಿದೆ.

<><><>

ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ, ಟ್ರಿಪಲ್ ಐಟಿ ಸಹಯೋಗದಲ್ಲಿ, ಡಿಪ್ಲೊಮಾ ವಿದ್ಯಾರ್ಥಿಗಳಿಗಾಗಿ, ರೋಬೋಟಿಕ್ಸ್ ಕಾರ್ಯಾಗಾರ, ಜರುಗಿತು.

<><><>

ಚಿಕ್ಕಮಗಳೂರು ಜಿಲ್ಲೆಯ 165 ಕ್ಕೂ ಹೆಚ್ಚಿನ, ಭಾರತ್ ಸಂಚಾರ ನಿಗಮ್ ಲಿಮಿಟೆಡ್ ಸಂಸ್ಥೆಯ ಮೊಬೈಲ್ ಟವರ್ ಗಳ ಮೂಲಕ ಪ್ರಸ್ತುತ 4 ಜಿ ಸೇವೆ ಲಭ್ಯವಿದೆ ಎಂದು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಕೇಂದ್ರ ದೂರ ಸಂಪರ್ಕ ಇಲಾಖೆ ಸಚಿವರಾದ ಜ್ಯೋತಿರಾದಿತ್ಯ ಸಿಂಧಿಯಾ ಅವರಿಗೆ ಈ ಹಿಂದೆ ಮನವಿ ಸಲ್ಲಿಸಲಾಗಿದ್ದು, 43 ಹಳ್ಳಿಗಳಲ್ಲಿ 4 ಜಿ ಸೇವೆ ಶೀಘ್ರ ಆರಂಭವಾಗಲಿದೆ ಎಂದರು.

<><><>

ಆಕಾಶವಾಣಿಯ ಬಹುಶ್ರುತ ಕಾರ್ಯಕ್ರಮ, 'ಮನ್ ಕಿ ಬಾತ್' ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 30, ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯನ್ನುದ್ದೇಶಿಸಿ, ಮಾತನಾಡಲಿದ್ದಾರೆ.

ಇದು ಮನದ ಮಾತಿನ 120ನೇ ಸಂಚಿಕೆಯಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>